# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **741** |
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 19-02-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ (ಕೆ) ಮತ್ತು ನಿಂಬೂರು ಗ್ರಾಮದಲ್ಲಿ 33 ಕೆ.ವಿ. ವಿದ್ಯುತ್ ವಿತರಣಾ ಉಪ ಕೇಂದ್ರ ಸ್ಥಾಪನೆಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; | ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ನಿಂಬೂರು ಗ್ರಾಮದಲ್ಲಿ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯು ಜೆಸ್ಕಾಂ ನಲ್ಲಿ ಇದ್ದು, ಸದರಿ ವಿದ್ಯುತ್ ಉಪ ಕೇಂದ್ರದ ಸ್ಥಾಪನೆಗೆ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಕಾಮಗಾರಿಯನ್ನು ಅವಾರ್ಡ್ ಮಾಡಲಾಗುತ್ತದೆ. ತದನಂತರ ಅವಾರ್ಡ್‌ನಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗದಿಪಡಿಸುವ ಕಾಲಮಿತಿಯೊಳಗೆ ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು ಪೂರ್ಣಗೊಳಿಸಲು ಜೆಸ್ಕಾಂ ವತಿಯಿಂದ ಕ್ರಮ ಕೈಗೊಳ್ಳಲಾಗುವುದು.<br><br>ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ (ಕೆ) ಗ್ರಾಮದಲ್ಲಿ 33 ಕೆ.ವಿ ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯು ಜೆಸ್ಕಾಂ ನಲ್ಲಿ ಇರುವುದಿಲ್ಲ. |
| ಆ) | ಬಂದಿದ್ದಲ್ಲಿ, ಸರ್ಕಾರ ಇನ್ನೂ ವಿದ್ಯುತ್ ವಿತರಣಾ ಉಪ ಕೇಂದ್ರ ಸ್ಥಾಪನೆ ಮಾಡದಿರುವುದಕ್ಕೆ ಕಾರಣಗಳೇನು; | |
| ಇ) | ಯಾವಾಗ ವಿದ್ಯುತ್ ವಿತರಣಾ ಉಪಕೇಂದ್ರ ಸ್ಥಾಪನೆ ಮಾಡಲಾಗುವುದು? (ಮಾಹಿತಿ ಒದಗಿಸುವುದು) | |

ಸಂಖ್ಯೆ: ಎನರ್ಜಿ 40 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು